**ಮಾನ್ಯ ವಿಧಾನ ಪರಿಷತ್ತಿನ ಸದಸ್ಯರಾದ ಶ್ರೀ ಶಾಂತಾರಾಮ ಸಿದ್ದಿ ಇವರು ಶೂನ್ಯ ವೇಳೆಯಲ್ಲಿ ಪ್ರಸ್ತಾಪಕ್ಕೆ ಉತ್ತರ.**

## ಸೂಚನೆ

**"ಪರಿಶಿಷ್ಟ ಪಂಗಡದಲ್ಲಿಯೂ ಜಾರಿಯಾಗಬೇಕು ಒಳಮಿಸಲಾತಿ"** ಎಂಬ ಶೀರ್ಷಿಕೆಯಡಿ ಪ್ರಜಾವಾಣಿ, ಸಂಯುಕ್ತ ಕರ್ನಾಟಕ ಮತ್ತು ರಾಜ್ಯದ ಇನ್ನಿತರ ಪತ್ರಿಕೆಗಳಲ್ಲಿ ವರದಿಯಾಗಿರುವ ಕೆಲವು ಅಂಶಗಳನ್ನು ಸದನದ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸಲು ಬಯಸುತ್ತೇನೆ.

ರಾಜ್ಯ ಸರ್ಕಾರ ಪರಿಶಿಷ್ಟ ಜಾತಿಗಳಿಗೆ ಮಾತ್ರ ಒಳಮೀಸಲಾತಿ ಜಾರಿ ಮಾಡಿದೆ. ಪರಿಶಿಷ್ಟ ಪಂಗಡಗಳಿಗೂ ಒಳಮೀಸಲಾತಿ ವಿಸ್ತರಿಸಲು ಅಗತ್ಯ ಕ್ರಮಕೈಗೊಳ್ಳಬೇಕು ಎಂದು ಬೆಂಗಳೂರಿನಲ್ಲಿ ನಡೆದ ವಿವಿಧ ಬುಡಕಟ್ಟು ಸಮುದಾಯಗಳ ನಾಯಕರಸಭೆ ಆಗ್ರಹಿಸಿದೆ. '2024ರ ಆಗಸ್ಟ್ 1ರಂದು ಪ್ರಕಟವಾದ ಒಳಮೀಸಲಾತಿ ಕುರಿತ ಐತಿಹಾಸಿಕ ತೀರ್ಪು ಪರಿಶಿಷ್ಟ ಜಾತಿ ಜೊತೆ ಪರಿಶಿಷ್ಟ ಪಂಗಡದಲ್ಲೂ ಮೀಸಲಾತಿ ವರ್ಗೀಕರಣ ಮಾಡಬೇಕು ಎಂದು ಸ್ಪಷ್ಟವಾಗಿ ಹೇಳಿತ್ತು. ಆದರೆ, ರಾಜ್ಯ ಸರ್ಕಾರ ಅದನ್ನು ಪಾಲಿಸಿಲ್ಲ' ಎಂಬ ಅಭಿಪ್ರಾಯ ಸಭೆಯಲ್ಲಿ ವ್ಯಕ್ತವಾಯಿತು.

ಪರಿಶಿಷ್ಟ ಪಂಗಡದಲ್ಲಿ ಒಳಮೀಸಲಾತಿ ಜಾರಿಯಾಗಬೇಕಿದೆ. ಸಣ್ಣ ಬುಡಕಟ್ಟುಗಳು, ಸೂಕ್ಷ್ಮ ಬುಡಕಟ್ಟುಗಳು, ದುರ್ಬಲ ಬುಡಕಟ್ಟುಗಳು ಮತ್ತು ಪ್ರಬಲ ಸಮುದಾಯಗಳು ಒಂದೇ ತಟ್ಟೆಯಲ್ಲಿನ ಊಟವನ್ನು ಹಂಚಿಕೊಳ್ಳುವಂತಾಗಿದೆ ಎಂದು ಅನೇಕ ಪತ್ರಿಕೆಗಳಲ್ಲಿ ವರದಿಯಾಗಿದೆ. ಸರ್ಕಾರ ಈ ಬಗ್ಗೆ ಮುತುವರ್ಜಿ ವಹಿಸಿ, ಇದಕ್ಕಾಗಿ, ನಿವೃತ್ತ ನ್ಯಾಯಮೂರ್ತಿ ನೇತೃತ್ವದ ಆಯೋಗ ರಚಿಸಬೇಕು ಎಂದು ಬುಡಕಟ್ಟು ಸಮುದಾಯಗಳ ಮುಖಂಡರು ಒತ್ತಾಯಿಸಿದ್ದಾರೆ.

ಸಾರ್ವಜನಿಕ ಮಹತ್ವದ ಸದರಿ ವಿಷಯವನ್ನು **ಸನ್ಮಾನ್ಯ ಮುಖ್ಯಮಂತ್ರಿಯವರು ಗಂಭೀರವಾಗಿ ಪರಿಗಣಿಸಿ ಪರಿಶಿಷ್ಟ ಪಂಗಡಗಳಲ್ಲಿಯೂ ಒಳಮಿಸಲಾತಿ ಜಾರಿಗೆ ತರಲು ಆಯೋಗವನ್ನು ರಚಿಸಿ ಸೂಕ್ತ ಪರಿಹಾರ ನೀಡಬೇಕೆಂದು** ಸದನದ ಶೂನ್ಯವೇಳೆಯಲ್ಲಿ ಪ್ರಸ್ತಾಪಿಸುತ್ತೇನೆ.

## ಉತ್ತರ

ಕರ್ನಾಟಕ ರಾಜ್ಯದ ಪರಿಶಿಷ್ಟ ಪಂಗಡದ ಪಟ್ಟಿಯಲ್ಲಿ 50 ಸಮುದಾಯಗಳು ಸೇರಿರುತ್ತವೆ. 2011 ರ ಜನಗಣತಿ ಪ್ರಕಾರ ಪರಿಶಿಷ್ಟ ಪಂಗಡದ ಜನಸಂಖ್ಯೆ 42,48,987 ಇರುತ್ತದೆ. ಪರಿಶಿಷ್ಟ ಪಂಗಡಗಳಲ್ಲಿ ಒಳಮೀಸಲಾತಿ ಜಾರಿ ಮಾಡುವ ಕುರಿತು ಮನವಿಗಳು ಸ್ವೀಕೃತಗೊಂಡಿದ್ದು, ಪ್ರಸ್ತುತ ಸರ್ಕಾರದ ಮುಂದೆ ಪರಿಶಿಷ್ಟ ಪಂಗಡಗಳಲ್ಲಿ ಒಳಮೀಸಲಾತಿ ಜಾರಿ ಕುರಿತು ಯಾವುದೇ ಪ್ರಸ್ತಾವನೆ ಇರುವುದಿಲ್ಲ.

STW/SECB/SAD/156/2025

(ಸಿದ್ದರಾಮಯ್ಯ)
ಮುಖ್ಯಮಂತ್ರಿ